ಸದನದಲ್ಲಿ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೆರಡನೆಯ ಅಧಿವೇಶನ

ಮಂಗಳವಾರ, ದಿನಾಂಕ : 08 ನೇ ಡಿಸೆಂಬರ್, 2020

ರಾಜ್ಯದಲ್ಲಿನ ತೋಟಗಾರಿಕಾ ಬೆಳೆಗಳ ಶೇಖರಣೆ ಕುರಿತು

ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) -

25 (118) ಪೌರಾಡಳಿತ ಹಾಗೂ ತೋಟಗಾರಿಕೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ-

(ಅ) ರಾಜ್ಯದಲ್ಲಿ ತೋಟಗಾರಿಕಾ ಬೆಳೆಗಳ ಶೇಖರಣೆಗೆ ಇರುವ ಒಟ್ಟು (ಖಾಸಗಿ ಮತ್ತು ಸರ್ಕಾರಿ ಸ್ವಾಯತ್ತತೆ) ಶಿಥಿಲೀಗೃಹಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ತೋಟಗಾರಿಕಾ ಬೆಳೆಗಳ ಅಸಮರ್ಪಕ ಕೊಯ್ಲೋತ್ತರ ನಿರ್ವಹಣೆ ಹಾಗೂ ಶಿಥಿಲೀಗೃಹಗಳ ಕೊರತೆಯಿಂದಾಗಿ ಅಪಾರ ನಷ್ಟ ಉಂಟಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಈ ತರಹದ ಹಾನಿಯನ್ನು ತಡೆಗಟ್ಟಲು ಹೆಚ್ಚಿನ ಸಂಖ್ಯೆಯಲ್ಲಿ ಶಿಥಲೀಗೃಹಗಳನ್ನು ನಿರ್ಮಾಣ ಮಾಡಲು ಸರ್ಕಾರ ಯೋಚಿಸಿದೆಯೇ ;

(ಈ) ಹಾಗಿದ್ದಲ್ಲಿ, ಅದಕ್ಕಾಗಿ ಮೀಸಲಿಡಲಾಗಿರುವ ಅನುದಾನವೆಷ್ಟು ; ಹಾಗೂ ಯಾವ ಯಾವ ಸ್ಥಳಗಳಲ್ಲಿ ಇದನ್ನು ಅನುಷ್ಠಾನಗೊಳಿಸಲಾಗುವುದು ?